# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:12ನೇ ಫೆಬ್ರವರಿ, 2019**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

### 02. ವರದಿಯನ್ನೊಪ್ಪಿಸುವುದು

**ಶ್ರೀ ಸಿ.ಎಂ.ಲಿಂಗಪ್ಪ** (ಸದಸ್ಯರು, ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿ) ಅವರು **ಕರ್ನಾಟಕ ವಿಧಾನ ಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ** 2018-2019ನೇ ಸಾಲಿನ 34ನೇ ವರದಿಯನ್ನು ಒಪ್ಪಿಸುವುದು.

### 03. ಗಮನ ಸೆಳೆಯುವ ಸೂಚನೆಗಳು

ಅ) **ಡಾ|| ತೇಜಸ್ವಿನಿ ಗೌಡ** ಅವರು ತೃತೀಯ ಲಿಂಗಿಗಳಿಗೆ ಉದ್ಯೋಗ ಭದ್ರತೆ ಮತ್ತು ಅಸಹಾಯಕ ವಯೋವೃದ್ಧರಿಗೆ ಮಾಶಾಸನ ನೀಡುವ ಬಗ್ಗೆ **ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ** ಗಮನ ಸೆಳೆಯುವುದು.

ಆ) **ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ ಅಡುಗೆಯವರು ಮತ್ತು ಅಡುಗೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ **ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ** ಗಮನ ಸೆಳೆಯುವುದು.

ಇ) **ಶ್ರೀ. ಪ್ರಾಣೇಶ್ ಎಂ.ಕೆ.** ಅವರು ಗ್ರಾಮೀಣ ಗ್ರಂಥಾಲಯಗಳಲ್ಲಿ ಕಳೆದ 30 ವರ್ಷಗಳಿಂದ ಗ್ರಂಥಪಾಲಕರಾಗಿ ಸೇವೆ ಸಲ್ಲಿಸುತ್ತಿರುವವರಿಗೆ ಕನಿಷ್ಠ ವೇತನವನ್ನು ನಿಗದಿಗೊಳಿಸುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

......2

## ೦4. ನಿಯಮ ೩೩೦ರ ಮೇರೆಗೆ

ಅ) **ಶ್ರೀ ಪುಟ್ಟಣ್ಣ** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನಡೆಯುತ್ತಿರುವ ಶಾಲೆಗಳಲ್ಲಿ ಸುಮಾರು 10-12 ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರನ್ನು ರಾಜ್ಯ ಉಚ್ಛನ್ಯಾಯಾಲಯದ ಆದೇಶದಂತೆ ಖಾಯಂಗೊಳಿಸುವುದು ಹಾಗೂ ಸದರಿಯವರುಗಳ ವೇತನವನ್ನು ಪ್ರತಿ ತಿಂಗಳು ಪಾವತಿಸುವ ಬಗ್ಗೆ ಪ್ರಸ್ತಾಪಿಸುವುದು.

ಆ) **ಶ್ರೀ ಎನ್. ರವಿಕುಮಾರ್** ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಅವಧಿ ಮೀರಿದ ಔಷಧಿಗಳು ಸರಬರಾಜು ಮಾಡುತ್ತಿರುವುದರಿಂದ ಅದನ್ನು ಬಳಸುತ್ತಿರುವ ರಾಜ್ಯದ ಜನತೆಯು ಅಡ್ಡ ಪರಿಣಾಮಗಳಿಂದ ಬಳಲುತ್ತಿರುವುದು ಹಾಗೂ ಔಷಧಿ ಸರಬರಾಜುದಾರರಿಗೆ ಬಿಲ್ಲುಗಳನ್ನು ಪಾವತಿಸದಿರುವ ಬಗ್ಗೆ ಪ್ರಸ್ತಾಪಿಸುವುದು.

## ೦5. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2019ನೇ ಫೆಬ್ರವರಿ, ೦6ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:07-02-2019ರಂದು **ಶ್ರೀ ಹೆಚ್.ಎಂ.ರೇವಣ್ಣ** ರವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ:

## ೦6. ವಿತ್ತೀಯ ಕಾರ್ಯಕಲಾಪ

2019-20ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**

---